# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:04.06.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ವೆಂಕಟೇಶ್ (ಕಾರ್ಯಪಾಲಕ ಅಭಿಯಂತರರು, ಟಿವಿಸಿಸಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ವೆಂಕಟೇಶ್ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 3 | ಬಸವರಾಜು | ಕಂದಾಯ ವಸೂಲಿಗಾರರು |
| 4 | ಶಿವಮ್ಮ | ಲಿಂಕ್ ವರ್ಕರ್ |
| 5 | ಜಯಲಕ್ಷ್ಮೀ | ಲಿಂಕ್ ವರ್ಕರ್ |
| 6 | ಬಿ. ಕೆ. ವಾಲ್ಟೀ | ವಾರ್ಡ್ ಮಾರ್ಷಲ್ |
| | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1. ಕಂದಾಯ ಇಲಾಖೆ:-**

ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗಿ, ಮನೆಯೊಳಗೆ ನೀರು ನುಗ್ಗಿ ಗೃಹೋಪಯೋಗಿ ವಸ್ತುಗಳು ಹಾಳಾಗಿದ್ದರಿಂದ, ಮಳೆಯಿಂದ ಹಾನಿಗೊಳಗಾಗಿರುವ ಸಂತ್ರಸ್ತರಿಗೆ ಪರಿಹಾರ ಒದಗಿಸಿರುವುದಾಗಿ ಕಂದಾಯ ಇಲಾಖೆಯಿಂದ ಹಾಜರಾಗಿದ್ದ ಬಸವರಾಜು, ಕಂದಾಯ ವಸೂಲಿಗಾರರು ನೋಡಲ್ ಅಧಿಕಾರಿಗಳಿಗೆ ತಿಳಿಸಿದರು.

**2) ಘನತ್ಯಾಜ್ಯ ನಿರ್ವಹಣೆ ವಿಭಾಗ:**

ಹಸಿ ಕಸ ಹಾಗೂ ಒಣ ಕಸ ವಿಂಗಡಣೆ ಮಾಡಲು ಹಾಗೂ ಮಳಿಗೆಗಳಲ್ಲಿ ಪ್ಲಾಸ್ಟಿಕ್ ನಿಷೇದ ಮಾಡುವಂತೆ ಜನರಲ್ಲಿ ಅರಿವನ್ನು ಮೂಡಿಸುತ್ತಿರುವುದಾಗಿ ಲಿಂಕ್ ವರ್ಕರ್ಸ್ ನೋಡಲ್ ಅಧಿಕಾರಿಗಳಿಗೆ ತಿಳಿಸಿದರು.

3) ವಾರ್ಡ್ ಮಾರ್ಷಲ್:-

ವಾರ್ಡ್‌ನಲ್ಲಿ ಮಾರ್ಷಲ್‌ಗಳು ಪ್ಲಾಸ್ಟಿಕ್ ಸೀಜ್ ಮಾಡಿ, ದಂಡ ವಿಧಿಸುತ್ತಿರುವುದಾಗಿ ಹಾಗೂ ಬ್ಲ್ಯಾಕ್ ಸ್ಪಾಟ್‌ಗಳಲ್ಲಿ ಕಸ ಎಸೆಯುವವರಿಗೂ ದಂಡ ವಿಧಿಸುತ್ತಿರುವುದಾಗಿ ನೋಡಲ್ ಅಧಿಕಾರಿಗಳಿಗೆ ತಿಳಿಸಿದರು.

4) ವಾರ್ಡ್ ಸಮಿತಿ ಸದಸ್ಯರು ಗೈರು ಹಾಜರಿ ಬಗ್ಗೆ:

ವಾರ್ಡ್-17ರಲ್ಲಿ ನಡೆಸುವ ವಾರ್ಡ್ ಸಮಿತಿ ಸಭೆಗೆ ಬೆಸ್ಕಾಂ, ಬಿಡಬ್ಲ್ಯೂಎಸ್‌ಎಸ್‌ಬಿ, ಎಸ್‌ಡಬ್ಲ್ಯೂಡಿ, ಅರಣ್ಯ, ಆರೋಗ್ಯ ಇಲಾಖೆಯ ಅಧಿಕಾರಿಗಳು ಗೈರು ಹಾಜರಾಗುತ್ತಿದ್ದು, ಸಾರ್ವಜನಿಕರ ದೂರುಗಳನ್ನು ಚರ್ಚಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಮುಂದಿನ ಸಭೆಗೆ ತಾವುಗಳು ಗೈರು ಹಾಜರಾದಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅಧ್ಯಕ್ಷರು ತಿಳಿಸಿದರು.

(ಸಂಬಂಧಪಟ್ಟ ವಿವಿಧ ಇಲಾಖೆಗಳ ವಾರ್ಡ್ ಸಮಿತಿ ಸದಸ್ಯರುಗಳಿಗೆ)

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವೆಂಕಟೇಶ್)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17